**ಕರ್ನಾಟಕ ಸರ್ಕಾರ**

ಸಂ.ವಇ/85/ಹೆಚ್‌ಎಎಂ/2007

ಕರ್ನಾಟಕ ಸರ್ಕಾರದ ಸಚಿವಾಲಯ
ವಿಕಾಸ ಸೌಧ,
ಬೆಂಗಳೂರು, ದಿನಾಂಕ 12-03-2007

**ಸುತ್ತೋಲೆ**

ವಿಷಯ: ವಿಶೇಷ ವರ್ಗಕ್ಕೆ ಸೇರಿದ ಫಲಾನುಭವಿಗಳನ್ನು ಆಯ್ಕೆ ಮಾಡಲು ಸಮಿತಿಯನ್ನು ರಚಿಸುವ ಬಗ್ಗೆ

ರಾಜೀವ್ ಗಾಂಧಿ ವಸತಿ ನಿಗಮದಿಂದ ಕೆಲವು ವಿಶೇಷ ವರ್ಗಕ್ಕೆ ಸೇರಿರುವ (ಅಂಗವಿಕಲರು, ಕುಷ್ಠರೋಗದಿಂದ ಗುಣಮುಖರಾದವರು, ಮಾಜಿ ಸೈನಿಕರು, ಹೆಚ್‌ಐವಿ +ve ಸೋಂಕಿಗೆ ಒಳಗಾದವರು, ಅರಣ್ಯ ಪ್ರದೇಶದಿಂದ ಹಾಗೂ Tank ಪ್ರದೇಶಗಳ ಅತಿಕ್ರಮಣದಿಂದ ತೆರವುಗೊಳಿಸಲಾದ ನಿರಾಶ್ರಿತರು, ಪ್ರವಾಹ ಪೀಡಿತರು, ದೇವದಾಸಿಯರು ಮತ್ತು ಇತರೆ ದೌರ್ಜನ್ಯಕ್ಕೊಳಗಾದ ಮಹಿಳೆಯರು, ಅಂಗನವಾಡಿ ಕಾರ್ಯಕರ್ತೆಯರು, ಮತೀಯ ಗಲಭೆಗೆ ಹಾಗೂ ಚಳುವಳಿಗಳಿಂದ ಹಾನಿಗೊಳಗಾದವರು, ನೇಕಾರರು, ಹಮಾಲರು, ಬೀಡಿ ಕಾರ್ಮಿಕರು ಹಾಗೂ ಕುಶಲಕರ್ಮಿಗಳು).

ಈ ವಿಶೇಷ ವರ್ಗದ ಫಲಾನುಭವಿಗಳ ಆಯ್ಕೆಗೆ ಹಾಗೂ ಯೋಜನಾ ಅನುಷ್ಠಾನಕ್ಕೆ ಒಂದು ವಿಶೇಷ ಪ್ರಕ್ರಿಯೆ ಬೇಕಾಗಿರುತ್ತದೆ.

ರಾಜೀವ್ ಗಾಂಧಿ ವಸತಿ ನಿಗಮವು ಅನುಷ್ಠಾನಗೊಳಿಸುತ್ತಿರುವ ಯೋಜನೆಗಳಲ್ಲಿ ವಿಶೇಷ ವರ್ಗಕ್ಕೆ ಸೇರಿದ ಫಲಾನುಭವಿಗಳ ವಿವರಗಳನ್ನು ಈ ಕೆಳಕಂಡ ಇಲಾಖೆಗಳು ತಯಾರಿಸಿ ಸದರಿ ಫಲಾನುಭವಿಯಾದಿಯನ್ನು ಗ್ರಾಮ ಪಂಚಾಯಿತಿ ಅಥವಾ ಪಟ್ಟಣ ಪಂಚಾಯಿತಿ/ಪುರಸಭೆ/ನಗರಸಭೆಗಳಿಗೆ ಒದಗಿಸಿ ಯೋಜನೆಯ ಮಾರ್ಗಸೂಚಿಯ ಪ್ರಕಾರ ಅರ್ಹತೆಯನ್ನು ಅವರುಗಳಿಂದ ದೃಢೀಕರಿಸಿ ಜಿಲ್ಲಾ ಮಟ್ಟದ ಸಮಿತಿ ಮುಂದೆ ಇಡತಕ್ಕದ್ದು.

| ಕ್ರ. ಸಂ. | ವಿಶೇಷ ವರ್ಗ | ಫಲಾನುಭವಿಗಳ ವಿವರಗಳನ್ನು ಒದಗಿಸುವ ಇಲಾಖೆಯ ಅಧಿಕಾರಿಗಳು |
|---|---|---|
| 1. | ಅಂಗವಿಕಲರು | ಅಂಗವಿಕಲರ ಕಲ್ಯಾಣ ಇಲಾಖೆಯ ಜಿಲ್ಲಾ ಮಟ್ಟದ ಅಧಿಕಾರಿ |
| 2. | ಕುಷ್ಠರೋಗದಿಂದ ಗುಣಮುಖರಾದವರು | ಆರೋಗ್ಯ ಇಲಾಖೆಯ ಜಿಲ್ಲಾ ಮಟ್ಟದ ಅಧಿಕಾರಿ |
| 3. | ಮಾಜಿ ಸೈನಿಕರು | ಜಿಲ್ಲಾ ಮಟ್ಟದ ಅಧಿಕಾರಿ, ಸೈನಿಕ ಕಲ್ಯಾಣ ಮತ್ತು ಪುನರ್ವಸತಿ ಇಲಾಖೆ |
| 4. | ಹೆಚ್‌ಐವಿ +ve ಸೋಂಕಿಗೆ ಒಳಗಾದವರು | ಜಿಲ್ಲಾ ಆರೋಗ್ಯ ಅಧಿಕಾರಿ, ಆರೋಗ್ಯ ಇಲಾಖೆ |
| 5. | ಅರಣ್ಯ ಪ್ರದೇಶದಿಂದ ಹಾಗೂ Tank ಪ್ರದೇಶಗಳ ಅತಿಕ್ರಮಣದಿಂದ ತೆರವುಗೊಳಿಸಲಾದ ನಿರಾಶ್ರಿತರು | ಜಿಲ್ಲಾ ಅರಣ್ಯ ಸಂರಕ್ಷಣಾಧಿಕಾರಿ, ಅರಣ್ಯ ಇಲಾಖೆ ಹಾಗೂ ತಹಶೀಲ್ದಾರ್, ಕಂದಾಯ ಇಲಾಖೆ |
| 6. | ಪ್ರವಾಹ ಪೀಡಿತರು | ತಹಶೀಲ್ದಾರ್, ಕಂದಾಯ ಇಲಾಖೆ |
| 7. | ದೇವದಾಸಿಯರು ಮತ್ತು ಇತರೆ ದೌರ್ಜನ್ಯಕ್ಕೊಳಗಾದ ಮಹಿಳೆಯರು ಮತ್ತು ಅಂಗನವಾಡಿ ಕಾರ್ಯಕರ್ತೆಯರು | ಜಿಲ್ಲಾ ಮಟ್ಟದ ಅಧಿಕಾರಿ, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ |
| 8. | ದೌರ್ಜನ್ಯಕ್ಕೆ ಒಳಗಾದವರು | ಜಿಲ್ಲಾ ಮಟ್ಟದ ಅಧಿಕಾರಿ, ಸಮಾಜ ಕಲ್ಯಾಣ ಇಲಾಖೆ |
| 9. | ಮತೀಯ ಗಲಭೆಗೆ ಹಾಗೂ ಚಳವಳಿಗಳಿಂದ ಹಾನಿಗೊಳಗಾದವರು | ತಾಶೀಲ್ದಾರ್, ಕಂದಾಯ ಇಲಾಖೆ |
| 10. | ನೇಕಾರರು, ಹಮಾಲರು, ಬೀಡಿ ಕಾರ್ಮಿಕರು ಹಾಗೂ ಕುಶಲಕರ್ಮಿಗಳು ಇತ್ಯಾದಿ | ಸಂಬಂಧಪಟ್ಟ ಇಲಾಖೆಯ ಜಿಲ್ಲಾ ಮಟ್ಟದ ಅಧಿಕಾರಿ |

ಸಂಬಂಧಪಟ್ಟ ಜಿಲ್ಲಾ ಮಟ್ಟದ ಇಲಾಖಾಧಿಕಾರಿಗಳು ಫಲಾನುಭವಿಗಳು ವಿಶೇಷ ಗುಂಪಿಗೆ ಸೇರಿರುವುದನ್ನು ಪರಿಶೀಲಿಸಿ ವಿವರಗಳನ್ನು ಸಮಿತಿಗೆ ನೀಡುವ ಜವಾಬ್ದಾರಿಯನ್ನು ಹೊಂದಿರುತ್ತಾರೆ. ಸ್ಥಳೀಯ ಸಂಸ್ಥೆಯ ಅಧಿಕಾರಿಗಳು ಫಲಾನುಭವಿಗಳ ವಾಸ್ತವ್ಯ ಆದಾಯ ಹಾಗೂ ಈಗಾಗಲೇ ಯಾವುದೇ ಯೋಜನೆಯಲ್ಲಿ ಮನೆಯನ್ನು ಪಡೆಯದೇ ಇರುವ ಬಗ್ಗೆ ಪರಿಶೀಲಿಸಿ ವಿವರಗಳನ್ನು ಸಮಿತಿಗೆ ಸಲ್ಲಿಸುವ ಜವಾಬ್ದಾರಿಯನ್ನು ಹೊಂದಿರುತ್ತಾರೆ.

ಸದರಿ ಜಿಲ್ಲಾ ಮಟ್ಟದ ಸಮಿತಿಗಳು ಈ ಕೆಳಕಂಡ ಸದಸ್ಯರನ್ನು ಹೊಂದಿರತಕ್ಕದ್ದು.

| | |
|---|---|
| ❖ ಜಿಲ್ಲಾಧಿಕಾರಿಗಳು | ಅಧ್ಯಕ್ಷರು |
| ❖ ಮುಖ್ಯ ಕಾರ್ಯನಿರ್ವಾಹಣಾಧಿಕಾರಿಗಳು, ಜಿಲ್ಲಾ ಪಂಚಾಯತ್ | ಉಪಾಧ್ಯಕ್ಷರು |
| ❖ ಜಿಲ್ಲಾ ಆರೋಗ್ಯಾಧಿಕಾರಿಗಳು | ಸದಸ್ಯರು |
| ❖ ಸಂಬಂಧಪಟ್ಟ ಜಿಲ್ಲೆಯ ಇಲಾಖಾ ಮುಖ್ಯಸ್ಥರು | " |
| ❖ ವಿಶೇಷ ವರ್ಗದವರ ಒಳಿತಿಗಾಗಿ ಕರ್ತವ್ಯ ನಿರ್ವಹಿಸುತ್ತಿರುವ ಸರ್ಕಾರೇತರ ಸಂಸ್ಥೆಯ ಪ್ರತಿನಿಧಿಗಳು (2 ಸರ್ಕಾರೇತರ ಸಂಸ್ಥೆಗಳನ್ನು ಜಿಲ್ಲಾಧಿಕಾರಿಗಳು ಆಯ್ಕೆ ಮಾಡತಕ್ಕದ್ದು) | " |
| ❖ ಜಿಲ್ಲಾ ಸಮಾಜ ಕಲ್ಯಾಣಾಧಿಕಾರಿಗಳು | " |
| ❖ ಜಿಲ್ಲೆಯ ಹಿಂದುಳಿದ ವರ್ಗಗಳ ಹಾಗೂ ಅಲ್ಪ ಸಂಖ್ಯಾತರ ಅಭಿವೃದ್ಧಿ ಇಲಾಖೆಯ ಅಧಿಕಾರಿಗಳು | " |
| ❖ ಕಾರ್ಯಪಾಲಕ ಅಭಿಯಂತರರು, ವಿದ್ಯುತ್ ಸರಬರಾಜು ಕಂಪನಿ | " |
| ❖ ಆಯಾ ತಾಲ್ಲೂಕಿನ ತಹಶೀಲ್ದಾರರು | " |
| ❖ ಆಯಾ ತಾಲ್ಲೂಕಿನ ಕಾರ್ಯನಿರ್ವಾಹಣಾಧಿಕಾರಿಗಳು | " |
| ❖ ಸಂಬಂಧಪಟ್ಟ ಪಟ್ಟಣದ ಆಯುಕ್ತರು/ಮುಖ್ಯಾಧಿಕಾರಿಗಳು | " |
| ❖ ಜಿಲ್ಲಾ ಮಟ್ಟದಲ್ಲಿ ವಸತಿ ಇಲಾಖೆಗಳ ಮೇಲುಸ್ತುವಾರಿ ವಹಿಸುತ್ತಿರುವ ಜಿಲ್ಲಾ ಪಂಚಾಯತಿಯ ನೋಡಲ್ ಅಧಿಕಾರಿ | ಸದಸ್ಯ ಕಾರ್ಯದರ್ಶಿಗಳು |

ಈ ರೀತಿಯಲ್ಲಿ ಫಲಾನುಭವಿಗಳ ಪಟ್ಟಿ ಹಾಗೂ ಫಲಾನುಭವಿಗಳ ಅರ್ಹತೆಯ ಬಗ್ಗೆ ವಿವರಗಳನ್ನು ಪಡೆದು ಈ ವಿಶೇಷ ವರ್ಗಕ್ಕೆ ಹೊರಡಿಸಲಾದ ಸೂಚನೆಗಳನ್ವಯ ಫಲಾನುಭವಿಗಳ ಪಟ್ಟಿಗೆ ಜಿಲ್ಲಾ ಮಟ್ಟದ ಸಮಿತಿಯು ಅನುಮೋದನೆ ನೀಡತಕ್ಕದ್ದು.

ಸಮಿತಿಯಿಂದ ಅನುಮೋದನೆಗೊಂಡ ಫಲಾನುಭವಿಗಳ ಪಟ್ಟಿಯನ್ನು ರಾಜೀವ್ ಗಾಂಧಿ ವಸತಿ ನಿಗಮಕ್ಕೆ ಕಳುಹಿಸಿ ಯೋಜನೆಯ ಅನುಷ್ಠಾನಕ್ಕೆ ಅನುಮೋದನೆ ಪಡೆಯುವುದು ಕಡ್ಡಾಯವಾಗಿರುತ್ತದೆ.

ಯೋಜನೆಯ ಅನುಷ್ಠಾನದ ಸಲುವಾಗಿ ಕಾಲಕಾಲಕ್ಕೆ ನಿಗಮದವರು ಸೂಕ್ತವಾದ ಸೂಚನೆಗಳನ್ನು ಸಂಬಂಧಪಟ್ಟ ಇಲಾಖೆಗಳಿಗೆ ಹಾಗೂ ಸ್ಥಳೀಯ ಸಂಸ್ಥೆಗಳಿಗೆ ಮತ್ತು ಜಿಲ್ಲಾ ಸಮಿತಿಗಳಿಗೆ ಹೊರಡಿಸುವುದು.

ನಿಗಮದಿಂದ ಹೊರಡಿಸಲಾಗುವ ಸೂಚನೆಗಳಿಗೆ ಅನುಗುಣವಾಗಿಯೇ ಸಂಬಂಧಪಟ್ಟ ಸ್ಥಳೀಯ ಸಂಸ್ಥೆಗಳು ಹಾಗೂ ಇಲಾಖೆಗಳು ಯೋಜನೆಯನ್ನು ಅನುಷ್ಠಾನಗೊಳಿಸತಕ್ಕದ್ದು.

(ರಂಗಮ್ಮ)
ಪೀಠಾಧಿಕಾರಿ-2
ವಸತಿ ಇಲಾಖೆ.

ಗೆ,
ಎಲ್ಲಾ ಜಿಲ್ಲಾಧಿಕಾರಿಗಳು
ಎಲ್ಲಾ ಮುಖ್ಯಕಾರ್ಯನಿರ್ವಹಣಾಧಿಕಾರಿಗಳು.